## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ. 1588/2021

ಸಾಕ್ಷಿದಾರರ ಹೇಳಿಕೆಃ

| | | |
|---|---|---|
| ಹೆಸರು | : ಶ್ರೀನಿವಾಸ ಎಂ ಆರ್ | ಚಾಸಾಃ **10** ಪ್ರಾಸಾಃ **10** |
| ತಂದೆಯ ಹೆಸರು | : ರಾಮಚಂದ್ರಪ್ಪ ಎ ಕೆ | |
| ವಯಸ್ಸು | : **48** ವರ್ಷ | |
| ವೃತ್ತಿ | : ಮುಖ್ಯ ಪೇದೆ | |
| ವಾಸಸ್ಥಳ | : ಚನ್ನಗಿರಿ | |

ದಿನಾಂಕಃ **08-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ

ನಾನು ಜೂನ್ 2020 ರಿಂದ 2022 ಜನವರಿ ವರೆಗೆ ಹೊನ್ನಾಳಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯ ನಿರ್ವಹಿಸುತ್ತಿದ್ದೆನು.

ದಿನಾಂಕಃ 06-02-2021 ರಂದು ನಾನು ಠಾಣಾ ಪ್ರಭಾರದಲ್ಲಿರುವಾಗ ರಾತ್ರಿ 09-30 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ, ಪ್ರಥಮ ವರ್ತಮಾನ ವರದಿಯನ್ನು ದಾಖಲು ಮಾಡಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 07-02-2021 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ನಮ್ಮ ಠಾಣೆಯ ಸಿಬ್ಬಂದಿಯವರ ಮೂಲಕ ಚಾಸಾ-2 ಮತ್ತು 3 ರವರಿಗೆ ನೋಟೀಸನ್ನು ಜಾರಿ ಮಾಡಿದ್ದು, ನಂತರ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮವನ್ನು ಸಂಜೆ 05-00 ರಿಂದ 06-00 ಗಂಟೆ ಸಮಯದಲ್ಲಿ ಜರುಗಿಸಿ

ಮು.ಮಾ.1 ಮತ್ತು 2 ಅನ್ನು ಅಮಾನತ್ತು ಪಡಿಸಿಕೊಂಡು ಕಚ್ಚ ನಕಾಶೆಯನ್ನು ತಯಾರಿಸಿ, ಛಾಯಾಚಿತ್ರಗಳನ್ನು ತೆಗೆದಿರುತ್ತೇನೆ.

ಅದೇ ದಿನ ಮು.ಮಾ.1 ಮತ್ತು 2 ಅನ್ನು ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿದಾರರಾದ ಚಾಸಾ-2 ರಿಂದ 8 ರವರ ಹೇಳಿಕೆ ಮತ್ತು ಮುಚ್ಚಳಿಕೆ ಪತ್ರಗಳನ್ನು ಪಡೆದುಕೊಂಡಿರುತ್ತೇನೆ. ಆರೋಪಿತರು ಸ್ವ ಇಚ್ಚೆಯಿಂದ ಠಾಣೆಗೆ ಹಾಜರಾಗಿದ್ದು ನಂತರ ದಸ್ತಗಿರಿ ಕ್ರಮವನ್ನು ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿಃ 02-07-2021 ರಂದು ಚಾಸಾ-1 ಮತ್ತು 5 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-9 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿ, ನಂತರ ತನಿಖೆಯಿಂದ ಆರೋಪಿತರ  ವಿರುದ್ಧ ಆರೋಪ ಸಾಭೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು, ಮಹಜರ್ ಅನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಡಿ) ಎಂದು, ನಿಪಿ-4 ಮತ್ತು 5 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಚಾಸಾ-2 ಮತ್ತು 3 ರವರಿಗೆ ನೀಡಿದ ನೋಟೀಸನ್ನು ಈಗಾಗಲೇ ನಿಪಿ-18 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-18(ಸಿ) ಎಂದು, ಚಾಸಾ-2 ಮತ್ತು 3 ರವರ ಹೇಳಿಕೆಗಳನ್ನು ಈಗಾಗಲೇ ನಿಪಿ-19 ಮತ್ತು 20 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ-19(ಎ) ಮತ್ತು 20(ಎ) ಎಂದು, ಚಾಸಾ-4 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-21 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-21(ಡಿ) ಎಂದು, ಚಾಸಾ-4 ಮತ್ತು 7 ರವರ ಹೇಳಿಕೆಗಳನ್ನು ಈಗಾಗಲೇ ನಿಪಿ-22 ಮತ್ತು 23 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿ ಗಳನ್ನು ನಿಪಿ-22(ಎ) ಮತ್ತು 23(ಎ) ಎಂದು, ಚಾಸಾ-8 ರವರ ಮುಚ್ಚಳಿಕೆ ಪತ್ರವನ್ನು

ಈಗಾಗಲೇ ನಿಪಿ-24 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-24(ಬಿ) ಎಂದು, ಚಾಸಾ-6 ರವರ ಹೇಳಿಕೆಯನ್ನು ಈಗಾಗಲೇ ನಿಪಿ-25 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-25(ಎ) ಎಂದು, ಚಾಸಾ-1 ಮತ್ತು 5 ರವರ ಗಾಯದ ಪ್ರಮಾಣ ಪತ್ರಗಳನ್ನು ಈಗಾಗಲೇ ನಿಪಿ-26 ಮತ್ತು 27 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-26(ಬಿ) ಮತ್ತು 27(ಬಿ) ಎಂದು, ಪ್ರಥಮ ವರ್ತಮಾನ ವರದಿಯನ್ನು ನಿಪಿ-28 ಎಂದು, ಸಾಕ್ಷಿಯ ಸಹಿಯನ್ನು ನಿಪಿ-28(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು :- ಆರೋಪಿತರ ಪರ ವಕೀಲರರಿಂದ :-</u>

ಚಾಸಾ-1 ರವರು ನೀಡಿದ ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರ.ವ.ವರದಿಯನ್ನು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿಲ್ಲ ಸ್ಥಳ ಮಹಜರ್ ಕ್ರಮವನ್ನು ಜರುಗಿಸಿಲ್ಲ ಕಚ್ಚ ನಕಾಶೆಯನ್ನು ತಯಾರಿಸಿಲ್ಲ ಮತ್ತು ಛಾಯಾಚಿತ್ರಗಳನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಮತ್ತು ಮುಚ್ಚಳಿಕೆ ಪತ್ರಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಮು.ಮಾ.1 ಮತ್ತು 2 ಅನ್ನು ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ಮತ್ತು 5 ರವರ ಗಾಯದ ಪತ್ರಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಚಾಸಾ-1 ರವರ ಮಾತುಕೇಳಿಕೊಂಡು ಸುಳ್ಳು ಪ್ರಕರಣವನ್ನು ದಾಖಲು ಮಾಡಿ ಸುಳ್ಳು ತನಿಖೆಯನ್ನು ನಡೆಸಿ ಮತ್ತು ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

**ಓ. ಹೇ. ಕೇ. ಸ. ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.